12. ಪ್ರಕಟಣೆ.

ಸಭಾಪತಿಯವರಿಂದ ಬಂದ ಸಂದೇಶ

ಅ. 2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ.

ಆ. 2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ.

ಉಪಾಧ್ಯಕ್ಷರು : "ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನ ಪರಿಷತ್ತು "2005ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ" ಹಾಗೂ "ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ" ಗಳನ್ನು ಈ ದಿನ, 2ನೇ ಆಗಸ್ಟ್, 2005ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆಯೆಂದು ತಿಳಿಸಿರುತ್ತಾರೆ. ಈಗ ಮಾನ್ಯ ಜಯಪ್ರಕಾಶ್ ಹೆಗ್ಡೆಯವರು ಮಾತನಾಡಿ.

13. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಶ್ನೋತ್ತರ ತೆಗೆದುಕೊಳ್ಳುವ ಬಗ್ಗೆ.

ಶ್ರೀ ಹೆಚ್. ಡಿ. ಬಸವರಾಜ್ : ಮಾನ್ಯ ಅಧ್ಯಕ್ಷರೆ, ಪ್ರಶ್ನೋತ್ತರಕ್ಕೆ ಅವಕಾಶ ಕೊಡಿ.

ಉಪಾಧ್ಯಕ್ಷರು:ಈ ಸಬ್ಜೆಕ್ಟ್ ಮುಗಿಯಲಿಲ್ಲ ಆಮೇಲೆ ಅದನ್ನು ತೆಗೆದುಕೊಳ್ಳೋಣ.

ಮಾನ್ಯ ಸದಸ್ಯರು : ಪ್ರಶ್ನೋತ್ತರಕ್ಕೆ ಅವಕಾಶ ಕೊಡಿ.

ಉಪಾಧ್ಯಕ್ಷರು : ಪ್ರಶ್ನೋತ್ತರವನ್ನೂ ಕೂಡ ತೆಗೆದುಕೊಳ್ಳೋಣ, ಇದು ಮುಗಿಯಲಿ. ಈ ಸಬ್ಜೆಕ್ಟ್ ಕಂಪ್ಲೀಟ್ ಆಗಲಿ. ಮಧ್ಯದಲ್ಲಿ ಬೇಡ.

ಮಾನ್ಯ ಸದಸ್ಯರು : ಸ್ಟಾರ್ಡ್ ಕೊಶ್ಚನ್ ತೆಗೆದುಕೊಳ್ಳಬೇಕು.

(ಗೊಂದಲ)

ಉಪಾಧ್ಯಕ್ಷರು : ಮಾನ್ಯ ಹೆಗ್ಡೆಯವರೆ, ಮಾತನಾಡಿ.

(ಗೊಂದಲ)

ಶ್ರೀ ಹೆಚ್. ಡಿ. ಬಸವರಾಜ್ : ಪ್ರಶ್ನೋತ್ತರ ನಾಳೆ ಮಾಡುವುದಕ್ಕೆ ಆಗುವುದಿಲ್ಲ.

ಒಬ್ಬ ಮಾನ್ಯ ಸದಸ್ಯರು : ಪ್ರಶ್ನೋತ್ತರ ತೆಗೆದುಕೊಳ್ಳಿ ಸ್ವಾಮಿ.

ಶ್ರೀ ಹೆಚ್. ಡಿ. ಬಸವರಾಜ್ : ಪ್ರಶ್ನೋತ್ತರ ನಾಳೆ ಮಾಡಲಿಕ್ಕೆ ಬರುವುದಿಲ್ಲ.

(ಗೊಂದಲ)

ಶ್ರೀ ವಾಟಾಳ್ ನಾಗರಾಜ್ : ದಯಮಾಡಿ ಪ್ರಶ್ನೋತ್ತರ ತೆಗೆದುಕೊಳ್ಳಿ.

ಶ್ರೀ ಹೆಚ್. ಡಿ. ಬಸವರಾಜ್ : ನಾವು ಬೆಳಿಗ್ಗೆಯಿಂದ ಕುಳಿದ್ದೇವೆ ಸಾರ್.